**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ 330 ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ:**

**ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರು ದಿನಾಂಕ: 30.05.2025 ರಂದು ಹೊರಡಿಸಿರುವ ಆದೇಶದಂತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕಡಿಮೆ ಫಲಿತಾಂಶ ಬಂದಿರುವ ಅನುದಾನಿತ ಶಾಲೆಗಳ ಶಿಕ್ಷಕರು ಮತ್ತು ಶಾಲೆಗಳಿಗೆ ಸಂಬಂದಿಸಿದಂತೆ ಅನುದಾನಕ್ಕೆ ಒಳಪಟ್ಟಿರುವ ಶಾಲೆಯ ವಿಷಯವಾರು ಫಲಿತಾಂಶವನ್ನು ಪರಿಗಣಿಸಿ ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶವನ್ನು ಪಡೆದಿರುವ ವಿಷಯ ಶಿಕ್ಷಕರನ್ನು ಗುರ್ತಿಸಿ ಅಂತಹವರ ವೇತನ ಬಡ್ತಿಯನ್ನು ತಡೆಹಿಡಿಯುವುದು ಅನುದಾನ ಪಡೆಯುತ್ತಿರುವ ವಿಷಯ ಶಿಕ್ಷಕರು ನಿರಂತರ ಮೂರು ವರ್ಷಗಳಲ್ಲಿ ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶ ನೀಡಿದಲ್ಲಿ ಅಂತಹ ವಿಷಯ ಶಿಕ್ಷಕರ ವೇತನಾನುದಾನವನ್ನು ತಡೆಹಿಡಿಯುವುದು ಒಂದು ಅನುದಾನಿತ ಪ್ರೌಢಶಾಲೆಯು ಸತತ ಐದು ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಲ್ಲಿ ಐದು ವರ್ಷಗಳು ನಿರಂತರವಾಗಿ ಕನಿಷ್ಟ ಶೇಕಡ 50 ವಿದ್ಯಾರ್ಥಿಗಳು ಉತ್ತೀರ್ಣರಾಗದಿದ್ದಲ್ಲಿ ಶಾಲೆಗೆ ನೀಡಲಾಗುತ್ತಿರುವ ವೇತನಾನುದಾನವನ್ನು ತಡೆಯಿಡಿಯುವುದು ಖಾಲಿ ಹುದ್ದೆಗೆ ಎದುರಾದ ಅನುದಾನಕ್ಕೊಳಪಡುವ ವಿಷಯ ಶಿಕ್ಷಕರ ಸಂಬಂಧಪಟ್ಟ ವಿಷಯದಲ್ಲಿ ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶ ಬಂದಲ್ಲಿ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು ನಿರಂತರವಾಗಿ ಮೂರು ವರ್ಷಗಳು ವಿಫಲವಾದಲ್ಲಿ ಅವರ ಅನುದಾನವನ್ನು ಹಿಂಪಡೆಯುವ ಬಗ್ಗೆ ಮಾಡಿರುವ ಆದೇಶವು ಅನುದಾನಿತ ಶಾಲೆಗಳಿಗೆ ಮರಣ ಶಾಸನವಾಗಿದೆ. ಅನುದಾನಿತ ಶಾಲೆಗಳನ್ನು ಮುಚ್ಚುವ ಅವೈಜ್ಞಾನಿಕ ಆದೇಶವಾಗಿದೆ. ಆದ್ದರಿಂದ ಸದರಿ ಆದೇಶವನ್ನು ವಾಪಸ್ ಪಡೆಯಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.**

**ಉತ್ತರ:**

ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶ ಬಂದ ಶಾಲೆಗಳಲ್ಲಿನ ಶಿಕ್ಷಕರನ್ನು ಗುರುತಿಸಿ ಅವರ ವಾರ್ಷಿಕ ವೇತನ ಬಡ್ತಿ ತಡೆಹಿಡಿಯುವುದು, ನಿರಂತರ 03 ವರ್ಷಗಳಲ್ಲಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶ ನೀಡಿದ ವಿಷಯ ಶಿಕ್ಷಕರ ವೇತನಾನುದಾನವನ್ನು ತಡೆಹಿಡಿಯುವುದು, ಸತತ 5 ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಪೈಕಿ ನಿರಂತರವಾಗಿ ಕನಿಷ್ಠ ಶೇಕಡ 50 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗದಿದ್ದಲ್ಲಿ ಅಂತಹ ಶಾಲೆಗಳಿಗೆ ವೇತನಾನುದಾನ ತಡೆಹಿಡಿಯುವುದು ಮತ್ತು ಸಂಬಂಧಪಟ್ಟ ವಿಷಯ ಶಿಕ್ಷಕರ, ವಿಷಯಗಳಲ್ಲಿ ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶ ಬಂದಲ್ಲಿ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು ಹಾಗೂ ನಿರಂತರವಾಗಿ 3 ವರ್ಷಗಳು ಫಲಿತಾಂಶ ಸುಧಾರಣೆಯಾಗಲು ವಿಫಲವಾದಲ್ಲಿ ಅವರ ವೇತಾನುದಾನವನ್ನು ಹಿಂಪಡೆಯಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017, ದಿನಾಂಕ: 06.03.2019 ರಲ್ಲಿ ತಿಳಿಸಲಾಗಿದೆ.

ಸದರಿ ಆದೇಶದಂತೆ 2024-25ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯ ಫಲಿತಾಂಶವನ್ನು ಪರಿಶೀಲಿಸಿ ಸಂಬಂಧಪಟ್ಟ ಶಾಲೆಗಳನ್ನು ಮತ್ತು ಶಿಕ್ಷಕರುಗಳನ್ನು ಗುರುತಿಸಿ ಶಾಲೆಗಳಲ್ಲಿನ ವಿದ್ಯಾರ್ಥಿಗಳ ಕಲಿಕೆಯ ಮಟ್ಟ, ಫಲಿತಾಂಶ ಸುಧಾರಣೆಯಾಗದ ಸಂದರ್ಭದಲ್ಲಿ ಅವರ ನಿರ್ಧಿಷ್ಟ ಪಾತ್ರವಿದ್ದಲ್ಲಿ, ಆಯುಕ್ತರ ಹಂತದಿಂದ ಕ್ರಮವಹಿಸಲು ತಿಳಿಸಲಾಗಿದೆ. ಆಯುಕ್ತರು ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ತಿಳಿಸಿರುತ್ತಾರೆ.

ಅದರಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಮೊದಲ ಹಂತದಲ್ಲಿ ಶಿಕ್ಷಕರು ಹಾಗೂ ಶಾಲೆಗಳಿಂದ ವಿವರಣೆಗಳನ್ನು ಪಡೆದು ಸಲ್ಲಿಸುವಂತೆ ತಿಳಿಸಲಾಗಿದ್ದು, ವರದಿ ಸ್ವೀಕೃತವಾದ ನಂತರ ನೀಡುವ ಸೂಚನೆಗಳಂತೆ ಕ್ರಮವಹಿಸಲು ತಿಳಸಲಾಗಿದೆ. ಈ ಆದೇಶವು ಖಾಸಗಿ ಅನುದಾನಿತ ಶಾಲೆಗಳಿಗೆ ಅನ್ವಯಿಸುವಂತೆ ಸರ್ಕಾರಿ ಶಾಲೆಗಳಿಗೂ ಅನ್ವಯಿಸುತ್ತದೆ. ಅದರಂತೆ ಶಾಲಾ ಶಿಕ್ಷಣ ಇಲಾಖೆಯ ಹಂತದಲ್ಲಿ ಕಾರಣ ಕೇಳುವ ನೋಟೀಸ್ ನೀಡಲಾಗಿರುತ್ತದೆ.

ವಿದ್ಯಾರ್ಥಿಗಳ ಹಿತಾದೃಷ್ಟಿ, ಉತ್ತಮ ಫಲಿತಾಂಶ ಪಡೆಯುವ ಉದ್ದೇಶದಿಂದ ಸರ್ಕಾರದ ಆದೇಶ ಸಂಖ್ಯೆ:ಇಡಿ 14 ಎಸ್‌ಇಪಿ 2017 ರ ದಿನಾಂಕ:06.03.2019 ರಲ್ಲಿನ ಆದೇಶದಂತೆ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

ಮುಂದುವರೆದು ರಾಜ್ಯ ಪ್ರಧಾನ ಕಾರ್ಯದರ್ಶಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘ (ರಿ), ಬೆಂಗಳೂರು ಜಿಲ್ಲಾ, ಅಧ್ಯಕ್ಷರು ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ, ರಾಜ್ಯ ಘಟಕ (ರಿ), ಹುಬ್ಬಳ್ಳಿ, ಗದಗ ಜಿಲ್ಲಾ ಘಟಕ, ಗದಗ ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ (ರಿ), ಬೆಂಗಳೂರು ರವರು ಸರ್ಕಾರದ ಆದೇಶವನ್ನು ಹಿಂಪಡೆಯಲು ಮನವಿ ಮಾಡಿರುತ್ತಾರೆ.

ಸದರಿ ವಿಷಯದ ಬಗ್ಗೆ ಕರ್ನಾಟಕ ವಿಧಾನ ಪರಿಷತ್ತಿನ ಹಲವಾರು ಮಾನ್ಯ ಸದಸ್ಯರುಗಳು ಸಹ ಶಿಕ್ಷಕರುಗಳ ಕುಂದು ಕೊರತೆಗಳನ್ನು ವಿವರಿಸಿ ಪರಿಹರಿಸುವ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಕೋರುತ್ತಿದ್ದು, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಂಖ್ಯೆ: ಇಪಿ 270 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**